# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1032 |
| ಸದಸ್ಯರ ಹೆಸರು | : | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.12.2021 |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅತಿಯಾದ ಮಳೆಯಿಂದಾಗಿ ಜಿಲ್ಲೆಯಲ್ಲಿ ಅತಿ ಹೆಚ್ಚು ಬೆಳೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಜುಲೈ-ಸೆಪ್ಟೆಂಬರ್ ತಿಂಗಳಿನಲ್ಲಿ ಅತಿಯಾದ ಮಳೆಯಿಂದ ಬೆಳೆ ಹಾನಿಯಾಗಿದ್ದು, ಇಲ್ಲಿಯವರೆಗೆ 1,88,195, ರೈತರಿಗೆ ರೂ.141.64 ಕೋಟಿ ಇನ್‌ಪುಟ್ ಸಬ್ಸಿಡಿಯನ್ನು ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆಯಾಗಿದೆ.<br><br>ಯಾದಗಿರಿ ಜಿಲ್ಲೆಯಲ್ಲಿ 2021ನೇ ಸಾಲಿನಲ್ಲಿ ಅಂದಾಜು ಒಟ್ಟು 10902.52 ಹೆಕ್ಟೇರ್ ನಷ್ಟು ಬೆಳೆ ಹಾನಿಯಾಗಿದ್ದು, ಪರಿಹಾರ ತಂತ್ರಾಂಶದ ಮೂಲಕ ಇಲ್ಲಿಯವರೆಗೆ 6817 ರೈತರ ಬ್ಯಾಂಕ್ ಖಾತೆಗೆ ರೂ.675.9 ಲಕ್ಷಗಳನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮ ಆಗಿರುತ್ತದೆ. |
| (ಆ) ಮೇಲ್ಕಂಡ ಜಿಲ್ಲೆಗಳಲ್ಲಿ ಅತಿಯಾದ ಮಳೆಯಿಂದಾಗಿ ಶೇ.40ರಷ್ಟು ಬೆಳೆ ಹಾನಿಯಾಗಿದೆಯೆಂದು ಕಂದಾಯ ಹಾಗೂ ಕೃಷಿ ಇಲಾಖೆ ನಡೆಸಿದ ಜಂಟಿ ಸಮೀಕ್ಷೆ ವರದಿ ಸರ್ಕಾರಕ್ಕೆ ಸಲ್ಲಿಕೆಯಾಗಿದೆ; | ಸರ್ಕಾರಕ್ಕೆ ಸಲ್ಲಿಸಿರುವ ಜಂಟಿ ಸಮೀಕ್ಷೆ ವರದಿಯನುಸಾರ ಯಾದಗಿರಿ ಜಿಲ್ಲೆಯಲ್ಲಿ 2021ನೇ ಸಾಲಿನಲ್ಲಿ ಅಂದಾಜು ಒಟ್ಟು 1090.52 ಹೆಕ್ಟೇರ್ ಹಾಗೂ ಕಲಬುರ್ಗಿ ಜಿಲ್ಲೆಯಲ್ಲಿ 2,46,003 ಹೆಕ್ಟೇರ್ ನಷ್ಟು ಬೆಳೆ ಹಾನಿಯಾಗಿದೆ. |
| (ಇ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯು ಹಿಂದುಳಿದ ಪ್ರದೇಶವಾದ ಕಾರಣ NDRF ನಿಯಮಾವಳಿ ಹೊರತುಪಡಿಸಿ ವಿಶೇಷ ಪ್ರಕರಣದಡಿ ನೆರವು ನೀಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? (ವಿವರ ನೀಡುವುದು) | ಕೇಂದ್ರ ಸರ್ಕಾರದ SDRF/NDRF ಮಾರ್ಗಸೂಚಿಯು ದೇಶಕ್ಕ ಏಕರೂಪವಾಗಿರುತ್ತದೆ. ಅದರನ್ವಯ ಪ್ರಸಕ್ತ ಸಾಲಿನ ಪ್ರವಾಹದಿಂದ ಉಂಟಾದ ಬೆಳೆ ಹಾನಿಗೆ ಇನ್‌ಪುಟ್ ಸಬ್ಸಿಡಿಯನ್ನು ಸಂತ್ರಸ್ಥರಿಗೆ ವಿತರಿಲಾಗುತ್ತಿದೆ. ಮಾರ್ಗಸೂಚಿಯನ್ನು ಹೊರತು ಪಡಿಸಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗೆ ಯಾವುದೇ ವಿಶೇಷ ಪ್ರಕರಣದಡಿ ನೆರವು ನೀಡುತ್ತಿಲ್ಲ. |

ಕಂಇ 586 ಟಿಎನ್‌ಆರ್ 2021

(ಆರ್. ಅಶೋಕ)
ಕಂದಾಯ ಸಚಿವರು